ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 11–01–2021

# ಮಾಧ್ಯಮ ಆಮಂತ್ರಣ

**1) ಸ್ವಾಮಿ ವಿವೇಕಾನಂದರ 158 ನೇ ಜನ್ಮ ದಿನಾಚರಣೆ :**

ಉದ್ಘಾಟನೆ:

ಬಿ. ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು.

ಘನ ಉಪಸ್ಥಿತಿ:

ಗೋವಿಂದ ಕಾರಜೋಳ, ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಇಲಾಖೆ ಸಚಿವರು

ಡಾ : ಅಶ್ವಥ್ ನಾರಾಯಣ್ ಸಿ.ಎನ್. ಉಪ ಮುಖ್ಯಮಂತ್ರಿಗಳು, ಉನ್ನತ ಶಿಕ್ಷಣ ಸಚಿವರು

ಲಕ್ಷ್ಮಣ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ದಿನಾಂಕ : 12–01–2021, ಮಂಗಳವಾರ, ಸಮಯ : ಬೆಳಿಗ್ಗೆ 11–00 ಗಂಟೆಗೆ

ಸ್ಥಳ : ಬ್ಯಾಂಕ್ವೆಟ್ ಹಾಲ್, ವಿಧಾನ ಸೌಧ, ಬೆಂಗಳೂರು

**2) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಿರ್ಮಿಸಿರುವ**

**ಬಿಬಿಎಮ್‌ಪಿ ಸ್ಕೌಟ್ಸ್ ಮತ್ತು ಗೈಡ್ಸ್ ಭವನದ ಉದ್ಘಾಟನೆ ಮತ್ತು ಸ್ವಾಮಿ ವಿವೇಕಾನಂದರ 158 ನೇ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ :**

ಉದ್ಘಾಟನೆ:

ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು.

ಘನ ಉಪಸ್ಥಿತಿ:

ಎಸ್. ಸುರೇಶ್ ಕುಮಾರ್, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ವಿ. ಸೋಮಣ್ಣ , ವಸತಿ ಸಚಿವರು

ದಿನಾಂಕ: 12-01-2021, ಮಂಗಳವಾರ, ಸಮಯ : ಬೆಳಿಗ್ಗೆ 11-00 ಗಂಟೆಗೆ

ಸ್ಥಳ: ಭಾರತ್ ಸ್ಕೌಟ್ ಮತ್ತು ಗೈಡ್ಸ್, ಕರ್ನಾಟಕ ಕೇಂದ್ರ ಕಛೇರಿ, ನಂ. 39, ಶಾಂತಿ ಗೃಹ, ಅರಮನೆ ರಸ್ತೆ, ಬೆಂಗಳೂರು – 560 001

## ಪತ್ರಿಕಾ ಪ್ರಕಟಣೆ

## ಗೃಹ ರಕ್ಷಕ ದಳದವರಿಗೆ ಛಾಯಾಚಿತ್ರ ಹಾಗೂ ಕಿರುಚಿತ್ರ ತಯಾರಿಕೆ ಕುರಿತು ಕಾರ್ಯಾಗಾರ

ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ): ತುರ್ತು ಸಂದರ್ಭ ಹಾಗೂ ಪ್ರಕೃತಿ ವಿಕೋಪದ ಸಂದರ್ಭಗಳಲ್ಲಿ ಸ್ಥಳದಲ್ಲಿದ್ದು ಮುಂಚೂಣಿಯಲ್ಲಿ ಕಾರ್ಯನಿರ್ವಹಿಸುವ ಗೃಹ ರಕ್ಷಕ ದಳದ ಸಿಬ್ಬಂದಿಗಳು ಘಟನೆಯ ಪರಿಣಾಮಗಳನ್ನು ಕಣ್ಣಾರೆ ಕಂಡು ಅನುಭವಿಸಿರುತ್ತಾರೆ ಹಾಗೂ ಮಾಧ್ಯಮ ಮತ್ತು ಸಮಾಜದ ನಡುವಿನ ಕೊಂಡಿಯಂತೆ ಮಾಹಿತಿ ಒದಗಿಸುತ್ತಾರೆ, ಇಂತಹ ಸಿಬ್ಬಂದಿಗಳಿಗೆ ಛಾಯಾಚಿತ್ರ ಮತ್ತು ಕಿರುಚಿತ್ರ ಕುರಿತು ಕಾರ್ಯಾಗಾರವನ್ನು ಹಮ್ಮಿಕೊಂಡಿರುವುದು ಅತ್ಯಂತ ಅರ್ಥಗರ್ಭಿತ ಎಂದು ಆರಕ್ಷಕ ಮಹಾ ನಿರ್ದೇಶಕರು ಗೃಹ ರಕ್ಷಕ ದಳ ಹಾಗೂ ಮಹಾ ನಿರ್ದೇಶಕರು ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ರಾಜ್ಯ ವಿಪತ್ತು ಸ್ಪಂದನೆ ಪಡೆಯ ಡಾ. ಅಮರ್ ಕುಮಾರ್ ಪಾಂಡೆ ಎಂದು ಹೇಳಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗೃಹ ರಕ್ಷಕ ದಳ ಹಾಗೂ ಪೌರ ರಕ್ಷಣಾ ಅಕಾಡೆಮಿ ಸಹಯೋಗದಲ್ಲಿ ಗೃಹ ರಕ್ಷಕ ದಳದ ಸಿಬ್ಬಂದಿಗಳಿಗಾಗಿ ನಗರದ ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆಯಲ್ಲಿರುವ ಗೃಹ ರಕ್ಷಕ ದಳ ಹಾಗೂ ಪೌರ ರಕ್ಷಣಾ ಅಕಾಡೆಮಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿರುವ ಎರಡು ದಿನಗಳ ಛಾಯಾಚಿತ್ರ ಹಾಗೂ ಕಿರುಚಿತ್ರ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತಾನಾಡಿದ ಅವರು ತುರ್ತು ಸೇವೆ ಅಡಿಯಲ್ಲಿ ಕಾರ್ಯನಿರ್ವಹಿಸುವ ಗೃಹ ರಕ್ಷಕ ದಳದ ಸಿಬ್ಬಂದಿಗಳು ಘಟನೆ

ನಡೆದ ಸ್ಥಳಗಳಲ್ಲಿ ಸಾಕ್ಷಿಯಾಗಿರುತ್ತಾರೆ, ಅಂಹವರಿಗೆ ಛಾಯಾಚಿತ್ರ ಹಾಗೂ ಕಿರುಚಿತ್ರ ತೆಗೆಯುವ ತಾಂತ್ರಿಕ ಜ್ಞಾನ ಇದ್ದಲ್ಲಿ ಅದನ್ನು ಉತ್ತಮವಾಗಿ ದಾಖಲಿಸಬಹುದು ಹಾಗೂ ಮಾಧ್ಯಮಗಳಿಗೆ ಈ ಕುರಿತು ಪುರಾವೆ ಸಹಿತ ಸಾಕ್ಷಿ ನೀಡಬಹುದಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗೃಹ ರಕ್ಷಕ ದಳದ ಸಿಬ್ಬಂದಿಗಳು ಅನೇಕ ವಿಷಯಗಳಲ್ಲಿ ನುರಿತ ಹಾಗೂ ಕೌಶಲ್ಯ ಹೊಂದಿದ ಸಿಬ್ಬಂದಿಗಳಾಗಿದ್ದು ಅವರಿಗೆ ಛಾಯಾಚಿತ್ರ ತೆಗೆಯುವ ಮತ್ತು ಚಿತ್ರೀಕರಿಸುವ ಕುರಿತು ತಾಂತ್ರಿಕ ಜ್ಞಾನ ಪಡೆಯುತ್ತಿರುವುದು ಹೊಸ ವಿಷಯವಾಗಿದೆ. ಈ ಸಿಬ್ಬಂದಿ ಕೇವಲ ತುರ್ತು ಸಂದರ್ಭಗಳಲ್ಲಿ ಸಹ ಅಲ್ಲದೆ ಪ್ರತಿ ನಿತ್ಯ ಇತರೆ ಇಲಾಖೆಗಳಲ್ಲಿ ಸಹ ಕಾರ್ಯ ನಿರ್ವಹಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ತುರ್ತು ಸಂದರ್ಭಗಳಲ್ಲಿ ಕಾರ್ಯನಿರ್ವಹಿಸುವ ಗೃಹ ರಕ್ಷಕ ದಳದ ಸಿಬ್ಬಂದಿಗಳಿಗೆ ಈ ತರಹದ ವಿನೂತನ ಕಾರ್ಯಾಗಾರ ಹಮ್ಮಿಕೊಳ್ಳುವ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಡಾ. ಪಿ.ಎಸ್. ಹರ್ಷ ಅವರು ಅಭಿಪ್ರಾಯ ವ್ಯಕ್ತಪಡಿಸಿದಾಗ ಇದೊಂದು ಉತ್ತಮ ಕಾರ್ಯ ಎನಿಸಿತು, ಸ್ಥಳದಲ್ಲಿಯೇ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಒಂದು ರೀತಿಯಲ್ಲಿ ತೆರೆಮರೆಯ ಹೀರೋಗಳಿದ್ದಂತೆ, ಅವರ ಕಾರ್ಯವನ್ನು ಅವರೇ ದಾಖಲಿಸುವುದು ಉತ್ತಮ ದಾಖಲೆಯಾಗಿ ಉಳಿಯುತ್ತದೆ ಎಂದು ಹೇಳಿದರು.

ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಸುನೀಲ್ ಅಗರ್‌ವಾಲ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತಾನಾಡಿ ತುರ್ತು ಸಂದರ್ಭಗಳಲ್ಲಿ ಪ್ರಾಣ ರಕ್ಷಣೆಯಂತ ಪುಣ್ಯದ ಕೆಲಸ ಮಾಡುವ ಗೃಹ ರಕ್ಷಕ ದಳ ಸಿಬ್ಬಂದಿ ಆಪತ್‌ಬಾಂಧವರಿದ್ದಂತೆ, ದಿನದ 24 ಗಂಟೆ ಕಾರ್ಯನಿರ್ವಹಿಸುವ ಸ್ಥಳದಲ್ಲಿ ನಡೆಯುವ ನೈಜ ಘಟನೆಗಳನ್ನು ದಾಖಲಿಸಲು ಗೃಹ ರಕ್ಷಕ ದಳಕ್ಕೆ ಈ ರೀತಿಯ ಕಾರ್ಯಾಗಾರದ ಅವಶ್ಯಕತೆ ಇತ್ತು. ಕೌಶಲ್ಯಯುತ ಸಿಬ್ಬಂದಿಗಳು ಆಯಾ ಇಲಾಖೆಯ ಆಸ್ತಿ ಇದ್ದಂತೆ, ಈ ಕಾರ್ಯಾಗಾರವನ್ನು ಗಂಬೀರವಾಗಿ ಪರಿಗಣಿಸಿ ಉತ್ತಮವಾಗಿ ಛಾಯಾಚಿತ್ರ ತೆಗೆಯುವುದನ್ನು ಕಲಿಯಬೇಕು ಮತ್ತು ಮನುಷ್ಯನ ಕಲಿಕೆಗೆ ಕೊನೆ ಇಲ್ಲ ಎಂದು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರಾದ ಡಾ. ಪಿ. ಎಸ್.ಹರ್ಷ ಅವರು ಪ್ರಾಸ್ತಾವಿಕವಾಗಿ ಮಾತಾನಾಡಿ ಇದೊಂದು ವಿಶಿಷ್ಟ ಹಾಗೂ ವಿನೂತನ ಕಾರ್ಯಕ್ರಮವಾಗಿದೆ. ವಿಪತ್ತು ನಿರ್ವಹಣೆ ಮತ್ತು ತುರ್ತು ಸಂದರ್ಭಗಳಲ್ಲಿ ಕಾರ್ಯನಿರ್ವಹಿಸುವ ತೆರೆಮರೆಯ ಹೀರೊಗಳು ಗೃಹ ರಕ್ಷಕ ಸಿಬ್ಬಂದಿಗಳು. ಅನೇಕ ಸಂದರ್ಭಗಳಲ್ಲಿ ವಾಸ್ತವತೆಯನ್ನು ಸಾರ್ವಜನಿಕರಿಗೆ ತಿಳಿಸಲು ಹಾಗೂ ಸರ್ಕಾರಕ್ಕೆ ಸಲ್ಲಿಸಲು ಛಾಯಾಚಿತ್ರ ಮತ್ತು ವಿಡಿಯೋ ದಾಖಲೆಗಳು ಪ್ರಮುಖ ಪಾತ್ರವಹಿಸುತ್ತವೆ. ಆದ್ದರಿಂದ, ಗೃಹ ರಕ್ಷಕ ದಳದ ಸಿಬ್ಬಂದಿಗಳು ಈ ಕಾರ್ಯಾಗಾರವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ವಿಜಯ ಕರ್ನಾಟಕ ದಿನಪತ್ರಿಕೆಯ ಸಂಪಾದಕ ಹರಿಪ್ರಕಾಶ್ ಕೋಣೆಮನೆ ಅವರು ತಮ್ಮ ಆಶಯ ಭಾಷಣದಲ್ಲಿ ಇದೊಂದು ಅಪರೂಪದ ಅರ್ಥಪೂರ್ಣ ಕಾರ್ಯಕ್ರಮವಾಗಿದೆ, ಪ್ರತಿಯೊಬ್ಬರೂ ಕಾರ್ಯನಿರ್ವಹಿಸುವುದು ಸಾರ್ವಜನಿಕರ ಹಿತರಕ್ಷಣೆಗಾಗಿ, ಪ್ರಸ್ತುತ ಬದಲಾದ ಮಾಧ್ಯಮದ ಸ್ವರೂಪ ಮುಂದೆ ಯಾವ ರೂಪ ಪಡೆಯುತ್ತದೆ ಎಂದು ಊಹಿಸಲು ಸಾಧ್ಯವಾಗುತ್ತಿಲ್ಲ. ಅನೇಕ ಘಟನೆಗಳಿಗೆ ಸಾಕ್ಷಿಯಂತಿರುವ ಗೃಹ ರಕ್ಷಕ ದಳ ಇಂತಹದೊಂದು

ಹೊಸತನಕ್ಕೆ ತೆರೆದುಕೊಳ್ಳುವುದರ ಮೂಲಕ ಮಾಧ್ಯಮಗಳಿಗೆ ಸಹ ನಿಖರ ಮಾಹಿತಿಯನ್ನು ಹಂಚಿಕೊಳ್ಳಲು ಸಹಾಯಕವಾಗುತ್ತದೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಕೆ. ಜಿ. ವಾಸುಕಿ ಅವರು ಮಾತಾನಾಡಿ ತಂತ್ರಜ್ಞಾನ ಇಂದು ಹೆಮ್ಮರವಾಗಿ ಬೆಳೆದಿದೆ, ಪ್ರತಿಯೊಬ್ಬರೂ ಇಂದು ಸ್ಮಾರ್ಟ್ ಫೋನ್‌ಗಳನ್ನು ಹೊಂದಿರುತ್ತಾರೆ, ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಳ್ಳಬೇಕು, ಈ ಕಾರ್ಯಾಗಾರದ ಕಲ್ಪನೆ ಅತ್ಯುತ್ತಮವಾಗಿದ್ದು, ನುರಿತ ಛಾಯಾಗ್ರಾಹಕರಿಂದ ಎರಡು ದಿನಗಳ ಕಾಲ ಈ ಕಾರ್ಯಾಗಾರದಲ್ಲಿ ತರಬೇತಿ ನೀಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಶ್ರೀಮತಿ ರೂಪ ಅವರು ಸ್ವಾಗತ ಕೋರಿದರು. ಕಾರ್ಯಕ್ರಮದ ನಂತರ ಆರಂಭವಾದ ಇಂದಿನ ಕಾರ್ಯಾಗಾರದಲ್ಲಿ ಖ್ಯಾತ ಛಾಯಾಗ್ರಾಹಕ ಹಾಗೂ ರಾಜ್ಯ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಎಸ್. ಈಶ್ವರ ಹಾಗೂ ಹಿರಿಯ ಪತ್ರಕರ್ತ ಸಗ್ಗರೆ ರಾಮಸ್ವಾಮಿ, ದಿ ಹಿಂದೂ ಪತ್ರಿಕೆಯ ನಿವೃತ್ತ ಮುಖ್ಯ ಛಾಯಾಗ್ರಾಹಕ ಕೆ. ಗೋಪಿನಾಥ್ ಮತ್ತು ದಿ ಮಿರರ್ ಛಾಯಾಗ್ರಾಹಕ ಅನಂತ ಸುಬ್ರಮಣ್ಯಂ ಅವರು ಛಾಯಾಚಿತ್ರ ಹಾಗೂ ಸುದ್ದಿಯ ಕುರಿತು ವಿಷಯ ಮಂಡನೆ ಮಾಡಿದರು.

ನಾಳಿನ ಕಾರ್ಯಗಾರದಲ್ಲಿ ವಿಪತ್ತು ಸಂದರ್ಭಗಳಲ್ಲಿ ಕಿರುಚಿತ್ರ ನಿರ್ಮಾಣ ಕುರಿತು ಮುಂಬೈನ ಎಂ.ಎನ್. ಗುಜಾರ್ ಅವರು ಕಾರ್ಯಾಗಾರವನ್ನು ನಡೆಸಿಕೊಡಲಿದ್ದು ಹಿರಿಯ ಪತ್ರಕರ್ತ ಪರಮೇಶ್ವರ ಭಟ್ ಅವರು ಉಪಸ್ಥಿತರಿರುತ್ತಾರೆ.

ನಾಳೆ ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದ್ದು ಕಾರ್ಯಗಾರದಲ್ಲಿ ಪಾಲ್ಗೊಂಡಿರುವ  ರಾಜ್ಯದ ವಿವಿಧ ಜಿಲ್ಲೆಗಳ 35 ಗೃಹ ರಕ್ಷಕ ಸಿಬ್ಬಂದಿಗಳಿಗೆ ಬೆಂಗಳೂರು ಪೋಲೀಸ್ ಮಹಾನಿರ್ದೇಶಕ ಪ್ರವೀಣ್ ಸೂದ್ ಅವರು ಅರ್ಹತಾ ಪ್ರಮಾಣ ಪತ್ರಗಳನ್ನು ವಿತರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ  ಆರಕ್ಷಕ ಮಹಾ ನಿರ್ದೇಶಕರು ಗೃಹ ರಕ್ಷಕ ದಳ ಹಾಗೂ ಮಹಾ ನಿರ್ದೇಶಕರ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ರಾಜ್ಯ ವಿಪತ್ತು ಸ್ಪಂದನೆ ಪಡೆ ಡಾ. ಅಮರ್ ಕುಮಾರ್ ಪಾಂಡೆ, ವಿಶ್ವವಾಣಿ ದಿನಪತ್ರಿಕೆಯ ಸಂಪಾದಕ ವಿಶ್ವೇಶ್ವರ ಭಟ್ ಹಾಗೂ  ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರಾದ ಡಾ.ಪಿ.ಎಸ್.ಹರ್ಷ ಅವರು ಭಾಗವಹಿಸಲಿದ್ದಾರೆ.

**ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ, 30 ವರ್ಷ ವಯೋಮಿತಿಯೊಳಗಿನ ಯುವಕ/ ಯುವತಿಯವರಿಗೆ ಚಲನಚಿತ್ರ ನಿರ್ದೇಶನ, ಛಾಯಾಗ್ರಹಣ, ವಿಡಿಯೋ ಸಂಕಲನ, ಸ್ಕ್ರಿಪ್ಟ್ ತಯಾರಿಕೆ, ಅಭಿನಯ ಇತ್ಯಾದಿಗಳ ಕುರಿತು ವಸತಿ ಸಹಿತ ತರಬೇತಿ ನೀಡಲು ಅರ್ಜಿ ಆಹ್ವಾನ**

ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ):

ಕರ್ನಾಟಕ ಚಲನಚಿತ್ರ ಅಕಾಡೆಮಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ 30 ವರ್ಷ ವಯೋಮಿತಿಯೊಳಗಿನ ಯುವತಿ/ಯುವಕರಿಗೆ ಚಲನಚಿತ್ರ ನಿರ್ದೇಶನ, ಛಾಯಾಗ್ರಹಣ, ವಿಡಿಯೋ ಸಂಕಲನ, ಸ್ಕ್ರಿಪ್ಟ್ ತಯಾರಿಕೆ, ಅಭಿನಯ ಇತ್ಯಾದಿಗಳ ಕುರಿತು ವಸತಿ ಸಹಿತ ಉಚಿತ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಚಲನಚಿತ್ರ ಕ್ಷೇತ್ರದ ಬಗ್ಗೆ ಆಸಕ್ತಿ ಹೊಂದಿರುವ 30 ವರ್ಷ ವಯೋಮಿತಿಯೊಳಗಿನ ಯಾವುದೇ ಪದವೀಧರ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಯುವಕ/ಯುವತಿಯರು ಅರ್ಜಿಗಳನ್ನು ಸಲ್ಲಿಸಬಹುದು. ಅರ್ಜಿ ನಮೂನೆಯನ್ನು ಅಕಾಡೆಮಿ ವೆಬ್ ಸೈಟ್ www.kcainfo.in ಇಲ್ಲಿ ಡೌನ್ ಲೋಡ್ ಮಾಡಬಹುದು ಅಥವಾ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಕಚೇರಿಯಿಂದ ಖುದ್ದು ಪಡೆಯಬಹುದಾಗಿದೆ.

ಪದವಿಯಲ್ಲಿ ಪಡೆದಿರುವ ಸರಾಸರಿ ಅಂಕದ ಜೇಷ್ಠತೆಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 20.01.2021 ರಂದು ಸಂಜೆ 5.00 ಘಂಟೆಯೊಳಗೆ ಅರ್ಜಿಯಲ್ಲಿ ತಿಳಿಸಿರುವ ದಾಖಲಾತಿಗಳೊಂದಿಗೆ ರಿಜಿಸ್ಟ್ರಾರ್, ಕರ್ನಾಟಕ ಚಲನಚಿತ್ರ ಅಕಾಡೆಮಿ, ಕನ್ನಡ ಚಲನಚಿತ್ರ ಅಮೃತೋತ್ಸವ ಭವನ, #20/ಎ, ನಂದಿನಿ ಲೇಔಟ್, ಪ್ರೆಸಿಡೆನ್ಸಿ ಶಾಲೆ ಪಕ್ಕ, ಬೆಂಗಳೂರು-560 096. ವಿಳಾಸಕ್ಕೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿರುವ 20.01.2021 ಕ್ಕೆ 30 ವರ್ಷ ವಯಸ್ಸಿನ ಒಳಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕೊನೆ ದಿನಾಂಕದ ನಂತರ ಸ್ವೀಕರಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ 080-23493410 ಕ್ಕೆ ಕಚೇರಿ ಅವಧಿಯಲ್ಲಿ ಸಂಪರ್ಕಿಸಲು ಕೋರಿದೆ.

## ಕಂದಾಯ ಸಚಿವರ ಪ್ರವಾಸ

**ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ): ಕಂದಾಯ ಸಚಿವ ಆರ್. ಅಶೋಕ್ ಅವರು ಜನವರಿ 12 ರವರೆಗೆ ಮೈಸೂರು, ಹಾಸನ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಸಚಿವರ ಪ್ರವಾಸ

**ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ): ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಜನವರಿ 12 ರವರೆಗೆ ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ
## ಗುರು ಶಿಷ್ಯ ಪರಂಪರೆಯೋಜನೆಯಡಿ 'ಸಂಗೀತ ನೃತ್ಯ ತರಬೇತಿಗೆ – ಅರ್ಜಿ ಆಹ್ವಾನ'

ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ):

ಕರ್ನಾಟಕ ಸಂಗಿತ ನೃತ್ಯ ಅಕಾಡೆಮಿಯು 2020-21ನೇ ಸಾಲಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಗುರು ಶಿಷ್ಯ ಪರಂಪರೆ ಯೋಜನೆಯಡಿ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಅಕಾಡೆಮಿ ವ್ಯಾಪ್ತಿಗೆ ಒಳಪಡುವ ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ಸುಗಮ ಸಂಗೀತ, ನೃತ್ಯ, ಕಥಾಕೀರ್ತನ ಮತ್ತು ಗಮಕ ಕಲಾಪ್ರಕಾರಗಳಲ್ಲಿ ಕಲಿಯಲು ಆಸಕ್ತಿಯುಳ್ಳ/ ಅಭ್ಯಾಸ ಮಾಡುತ್ತಿರುವ/ ಹೆಚ್ಚಿನ ಅಭ್ಯಾಸ ಮಾಡಲಿಚ್ಚಿಸುವ ವಿದ್ಯಾರ್ಥಿಗಳಿಗೆ 3 ತಿಂಗಳವರೆಗೆ ತರಬೇತಿ ನೀಡಲು ಅರ್ಜಿ ಆಹ್ವಾನಿಸಿಸಲಾಗಿದೆ.

14 ರಿಂದ 26 ವರ್ಷ ವಯೋಮಾನದ ಒಳಗಿರುವ ಅಭ್ಯರ್ಥಿಗಳು ಅರ್ಜಿಯನ್ನು ಅಕಾಡೆಮಿಯ ಕಛೇರಿ ವೇಳೆಯಲ್ಲಿ (ಬೆಳಗ್ಗೆ 10.00 ರಿಂದಸಂಜೆ 5.30 ಗಂಟೆವರೆಗೆ) ಅಲ್ಲದೇ ಅಕಾಡೆಮಿ ಅಂರ್ತಜಾಲ ತಾಣhttps//karnatakasangeetanrityaacademy.com ಮೂಲಕ ಪಡೆದು ಸಲ್ಲಿಸಬಹುದಾಗಿದೆ.ಬೇರೆ ಬೇರೆ ಜಿಲ್ಲೆಯ ಅಭ್ಯರ್ಥಿಗಳು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದಾಗಿದೆ.

ಅರ್ಜಿಯನ್ನುರಿಜಿಸ್ಟ್ರಾರ್, ಕರ್ನಾಟಕ ಸಂಗೀತ ನೃತ್ಯಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560 002 ಇಲ್ಲಿಗೆ ಕೊನೆಯ ದಿನಾಂಕ: 30.01.2021 ರ ಒಳಗಾಗಿ ಕಳುಹಿಸಿಕೊಡಬೇಕಾಗಿ ಅಧಿಕೃತ ಪ್ರಕಟಣೆ ತಿಳಿಸಿದೆ.

## ಪಲ್ಸ್ ಪೋಲೀಯೋ ಕಾರ್ಯಕ್ರಮ ಮುಂದೂಡಿಕೆ

ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ):

ಜನವರಿ 17 ರಂದು ನಡೆಯಬೇಕಾಗಿದ್ದ ಪಲ್ಸ್‌ಪೋಲೀಯೋ ಕಾರ್ಯಕ್ರಮವನ್ನು ಮುಂದೂಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರಕ್ಷಣೆ ನೀಡಲು ಕೋರಿಕೆ

ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ):

**ಬೆಳಗಾವಿ ಮಹಾನಗರ ಪಾಲಿಕೆಯ ಮುಂಭಾಗದಲ್ಲಿ ಧ್ವಜಸ್ತಂಭ ಸ್ಥಾಪನೆ ಮಾಡಿದ ಕನ್ನಡಪರ ಹೋರಾಟಗಾರರಿಗೆ ರಕ್ಷಣೆ ನೀಡಿ ಧ್ವಜಸ್ತಂಭವನ್ನು ರಕ್ಷಿಸುವ ಬಗ್ಗೆ ನಿಯಮಾನುಸಾರ ಸೂಕ್ತ ರಕ್ಷಣೆ ನೀಡಲು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ: ಸಿ. ಸೋಮಶೇಖರ ಅವರು ಗೃಹ ಸಚಿವರಿಗೆ ಪತ್ರ ಬರೆದು ಕೋರಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.**

## ಬೆಂಗಳೂರು ವಿಭಾಗದ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರಧಾನ ಸಮಾರಂಭ (ವರ್ಚುಯಲ್ ಸಭೆ)

**ಬೆಂಗಳೂರು, ಜನವರಿ 11 (ಕರ್ನಾಟಕ ವಾರ್ತೆ):**

ಬೆಂಗಳೂರು ವಿಭಾಗದ 2020-21ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಜನವರಿ 12, 2021ರ ಬೆಳಗ್ಗೆ 10.30 ಗಂಟೆಗೆ ಆನ್ ಲೈನ್(ವರ್ಚುಯಲ್)ಮೂಲಕ ಆಯೋಜಿಸಲಾಗಿದೆ.

ಬೆಂಗಳೂರು ವಿಭಾಗದ ಪ್ರತಿ ತಾಲೂಕಿನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಮೂರು ವಿದ್ಯಾಥಿಗಳಂತೆ ಎಸ್.ಎಸ್.ಎಲ್.ಸಿ.ಯ 195 ಹಾಗೂ ಪಿ.ಯು.ಸಿ.ಯ 158 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 353 ವಿದ್ಯಾರ್ಥಿಗಳನ್ನು ಗೌರವಿಸಿ ಸನ್ಮಾನಿಸಲಾಗುವುದು. ಈ ಪುರಸ್ಕಾರವು ಒಂದು ಪ್ರಥಮ ನಗದು ಬಹುಮಾನ 12,000/-, ಒಂದು ದ್ವಿತೀಯ ಬಹುಮಾನ 11,000/-, ಒಂದು ತೃತೀಯ ಬಹುಮಾನ 10,000/-ಗಳಲ್ಲದೇ ಪ್ರಾಧಿಕಾರದ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಶ್ರೀ ಟಿ.ಎಸ್. ನಾಗಾಭರಣ ರವರು ವಹಿಸಲಿದ್ದು ಶ್ರೀಮತಿ ವಿ ರಶ್ಮಿ ಮಹೇಶ್ ರವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸರ್ಕಾರ ರವರು ವಿಶೇಷ ಅಹ್ವಾನಿತರಾಗಿ ಭಾಗವಹಿಸಲಿದ್ದಾರೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಶ್ರೀ ಡಾ: ಕೆ ಮುರಳೀಧರ ರವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಶ್ರೀ ಪ್ರೊ..ಅಬ್ದುಲ್ ರೆಹಮಾನ್ ಪಾಷ,ಶ್ರೀ ರೋಹಿತ್ ಚಕ್ರತೀರ್ಥ,ಡಾ.ಸಿ.ಎ ಕಿಶೋರ್ ರವರುಗಳು ಮುಖ್ಯ ಅಥಿತಿಗಳಾಗಿ ಭಾಗವಹಿಸಲಿದ್ದಾರೆ.

## “ಡಿಪ್ಲೊಮಾ ಇನ್‌ಕೋ-ಆಪರೇಟಿವ್ ಮ್ಯಾನೇಜ್‌ಮೆಂಟ್” (ದೂರ ಶಿಕ್ಷಣ) ತರಬೇತಿಯ ಪ್ರವೇಶ ಪ್ರಕಟಣೆ

## (ಸಹಕಾರ ಸಂಘಗಳ ಸಿಬ್ಬಂದಿಗಳಿಗೆ ಮಾತ್ರ)

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಬೆಂಗಳೂರು ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿ ಸಂಸ್ಥೆಯ ಮೂಲಕ ಸಹಕಾರ ಸಂಘ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಮಾತ್ರ **"6 ತಿಂಗಳು/180 ದಿನಗಳ"** ಅವಧಿಯ **ದೂರ ಶಿಕ್ಷಣದ ಮೂಲಕ "ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್"** ತರಬೇತಿಯನ್ನು ಜನವರಿ ಮಾಹೆಯಿಂದ ಪ್ರಾರಂಭಿಸಲಾಗುವುದು. ಈ ತರಬೇತಿಯನ್ನು ಪಡೆಯಲಿಚ್ಛಿಸುವ ಅರ್ಹ ಸಿಬ್ಬಂದಿಗಳಿಂದ ಮಾತ್ರ ಅರ್ಜಿಗಳನ್ನು ಆಹ್ವಾನಿಸಲಾಗಿದೆ ದಿನಾಂಕ: 01.01.2021 ರಿಂದ ಮೇಲ್ಕಂಡ ತರಬೇತಿ ಕೇಂದ್ರದಲ್ಲಿ ಅರ್ಜಿ ವಿತರಿಸಲಾಗುವುದು.

ದೂರ ಶಿಕ್ಷಣ ಡಿ.ಸಿ.ಎಂ., ತರಬೇತಿಯ ಅರ್ಜಿ ಫಾರಂ ಮತ್ತು ಕೈಪಿಡಿ ಪುಸ್ತಕವನ್ನು ಕೆ.ಐ.ಸಿ.ಎಂ., ತರಬೇತಿ ಸಂಸ್ಥೆ ಹಾಗೂ ಜಿಲ್ಲಾ ಸಹಕಾರ ಯೂನಿಯನ್‌ಗಳಿಂದ ಪಡೆಯಬಹುದು. ಅರ್ಜಿ ಮತ್ತು ಕೈಪಿಡಿ ಪುಸ್ತಕದ ಶುಲ್ಕ ರೂ.200/–(ರೂಪಾಯಿ ಎರಡು ನೂರು ಮಾತ್ರ) ಗಳನ್ನು ನಗದಾಗಿ ಪಾವತಿಸಿ ತರಬೇತಿ ಸಂಸ್ಥೆ ಹಾಗೂ ಜಿಲ್ಲಾ ಸಹಕಾರ ಯೂನಿಯನ್‌ನಲ್ಲಿ ಪಡೆಯಬಹುದು. ಅಂಚೆಯ ಮೂಲಕ ಅರ್ಜಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ರೂ.10/– ಮೌಲ್ಯದ ಸ್ಟಾಂಪ್ ಅಂಟಿಸಿದ ಸ್ವ–ವಿಳಾಸವಿರುವ 12"x10" ಅಳತೆಯ ಲಕೋಟೆಯನ್ನು ರೂ.200/–ಗಳ ಡಿ.ಡಿ/ಪೋಸ್ಟಲ್ ಆರ್ಡರ್ ಜೊತೆಗೆ ಲಗತ್ತಿಸಿ ಕಳುಹಿಸಿ ಪ್ರಾಂಶುಪಾಲರಿಂದ ಪಡೆಯಬಹುದು. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಸ್ಥೆಗಳ ಸಿಬ್ಬಂದಿಗಳು ದಿನಾಂಕ: 31.01.2021ರ ಒಳಗಾಗಿ ಅರ್ಜಿಯನ್ನು ಭರ್ತಿ ಮಾಡಿ ಪ್ರಾಂಶುಪಾಲರು, ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಬೆಂಗಳೂರು ಇವರಿಗೆ ಸಲ್ಲಿಸುವುದು ಹಾಗೂ ಅರ್ಜಿಯನ್ನು ಅನ್‌ಲೈನ್ ಮೂಲಕವೂ ಸಹ ಸಲ್ಲಿಸಬಹುದು. **ಅನ್‌ಲೈನ್ ಪ್ರವೇಶಾತಿಯ ಲಿಂಕ್: www.kscfdcm.co.in** ಹೆಚ್ಚಿನ ಮಾಹಿತಿ ಬೇಕಾದಲ್ಲಿ ಕೆ.ಐ.ಸಿ.ಎಂ, ಬೆಂಗಳೂರು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದು. ದೂರವಾಣಿ ಸಂಖ್ಯೆ: **080–26602046, 9902189872, 8861508926.**

**ಅರ್ಜಿ ದೊರೆಯುವ ಸ್ಥಳ: ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್, ಸಹಕಾರ ಭವನ, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಕಟ್ಟಡ, ನಂ 1/3, 2ನೇ ಮಹಡಿ, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560018**

## Karnataka State Pollution Control Board

# ParisaraBhavan, Bengaluru
# AQI of the CAAQM stations established in Bengaluru City
## Date :11.1.2021

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 73 | Satisfactory | $PM_{10}$ |
| 2 | Jayanagar 5th Block, Shalini ground | 74 | Satisfactory | $PM_{10}$ |
| 3 | KAVIKA, Mysore Road | 76 | Satisfactory | $NO_2$ |
| 4 | Rajeev Gandhi Institute of Chest Disease, NIMHANS, Hombegowda Nagar | 54 | Satisfactory | $PM_{10}$ |
| 5 | HSR Layout, near Central Silkboard | 51 | Satisfactory | $PM_{2.5}$ |
| 6 | City Railway Station, Magestic, Bengaluru | 81 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 39 | Good | $PM_{10}$ |
| 8 | BWSSB, Kadabesanahalli | 40 | Good | $PM_{2.5}$ |
| 9 | Peenya | * | * | * |
| 10 | BTM Layout | 37 | Good | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |

| | | | |
|---|---|---|---|
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

# ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
## ಪರಿಸರ ಭವನ, ಬೆಂಗಳೂರು.
### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೀಕ್ಷಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 11.1.2021**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 73 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 74 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 76 | ತೃಪ್ತಿಕರ | $NO_2$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 54 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 51 | ತೃಪ್ತಿಕರ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 81 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 39 | ಉತ್ತಮ | $PM_{10}$ |
| 8 | BWSSB, ಕಾಡಬೀಸನಹಳ್ಳಿ | 40 | ಉತ್ತಮ | $PM_{2.5}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 37 | ಉತ್ತಮ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |

| | |
|---|---|
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |